## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜಿಲ್ಲಾ ಯೋಜನಾ ಸಮಿತಿ ಸಭೆಗೆ ಹಾಜರಾಗುವ ಸದಸ್ಯರುಗಳಿಗೆ ಉಪವೇಶನ ಭತ್ಯೆ ಪಾವತಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ.ಪಿ 229 ಝಡ್.ಪಿ.ಎಸ್. 2000, ದಿನಾಂಕ: 12.04.2001.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 67 ಜಿಪಸ 2014, ದಿನಾಂಕ: 17.03.2015.

**ಪ್ರಸ್ತಾವನೆ:**

ಮೇಲೆ ಓದಲಾದ (1) ಮತ್ತು (2)ರಲ್ಲಿನ ಸರ್ಕಾರದ ಸುತ್ತೋಲೆಗಳಲ್ಲಿ ಜಿಲ್ಲಾ ಯೋಜನಾ ಸಮಿತಿಗಳ ಕಾರ್ಯವಿಧಾನಗಳ ಬಗ್ಗೆ ಹೊರಡಿಸಲಾಗಿರುತ್ತದೆ. ಇತ್ತೀಚೆಗೆ ಅಧಿಕಾರ ವಿಕೇಂದ್ರೀಕರಣ ನೀತಿ ಅನುಸಾರ ಪಂಚಾಯತ್ ರಾಜ್ ಸಂಸ್ಥೆಗಳಿಗೆ ವಿವಿಧ ಅಭಿವೃದ್ಧಿ ಇಲಾಖಾ ಕಾರ್ಯಕ್ರಮಗಳನ್ನು ವರ್ಗಾಯಿಸಿ, ಅನುಷ್ಠಾನದ ಜವಾಬ್ದಾರಿಯನ್ನು ನೀಡಲಾಗಿದ್ದು, ಪಂಚಾಯತ್ ರಾಜ್ ಸಂಸ್ಥೆಗಳ ಕಾರ್ಯ ಚಟುವಟಿಕೆಯ ವ್ಯಾಪ್ತಿ ವಿಸ್ತಾರಗೊಂಡಿರುವುದರಿಂದ, ಮೇಲೆ ಓದಲಾದ ಕ್ರ.ಸಂ (2)ರ ಸುತ್ತೋಲೆಯಲ್ಲಿ ಜಿಲ್ಲಾ ಯೋಜನಾ ಸಮಿತಿಗಳ ಕಾರ್ಯವಿಧಾನದ ಬಗ್ಗೆ ಮತ್ತೊಮ್ಮೆ ಮಾರ್ಗಸೂಚಿಯನ್ನು ಹೊರಡಿಸಲಾಗಿರುತ್ತದೆ. ಉಲ್ಲೇಖಿತ ಮಾರ್ಗಸೂಚಿಗಳಲ್ಲಿ ಜಿಲ್ಲಾ ಯೋಜನಾ ಸಮಿತಿ ನಿಧಿಯನ್ನು ರಚಿಸಿಕೊಳ್ಳುವಂತೆ ಮತ್ತು ಇದರಿಂದ ಸಮಿತಿ ಸದಸ್ಯರಿಗೆ ಉಪವೇಶನ ಭತ್ಯೆಯನ್ನು ಪಾವತಿಸಲು ಅವಕಾಶ ಕಲ್ಪಿಸಿರುತ್ತದೆ.

ಜಿಲ್ಲಾ ಯೋಜನಾ ಸಮಿತಿಯ ಸದಸ್ಯರುಗಳು ಸಭೆಗಳಲ್ಲಿ ಕ್ರಿಯಾತ್ಮಕವಾಗಿ ಭಾಗವಹಿಸಿ ಸಲಹೆ ಸೂಚನೆಗಳನ್ನು ನೀಡಬೇಕಾಗಿರುತ್ತದೆ. ಇಂತಹ ಸಭೆಗಳಲ್ಲಿ ಭಾಗವಹಿಸುವ ಸದಸ್ಯರುಗಳಿಗೆ ಉಪವೇಶನ ಭತ್ಯೆಯನ್ನು ಪಾವತಿಸುವುದು ಸೂಕ್ತವೆಂದು ಸರ್ಕಾರ ಪರಿಗಣಿಸಿರುತ್ತದೆ. ಆದುದರಿಂದ ಜಿಲ್ಲಾ ಯೋಜನಾ ಸಮಿತಿಯ ಸದಸ್ಯರುಗಳಿಗೆ ಉಪವೇಶನ ಭತ್ಯೆಯನ್ನು ಪಾವತಿಸಲು ಸರ್ಕಾರದ ಆದೇಶ ಹೊರಡಿಸಬೇಕಾಗಿದೆ ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ಜಿಪಸ 2014, ದಿನಾಂಕ: 24.07.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಜಿಲ್ಲಾ ಯೋಜನಾ ಸಮಿತಿ ಸಭೆಗಳಲ್ಲಿ ಭಾಗವಹಿಸುವ ಸದಸ್ಯರುಗಳಿಗೆ ಪ್ರತಿ ದಿನದ ಭಾಗವಹಿಸುವಿಕೆಗೆ ರೂ. 500/-(ಐದು ನೂರು ರೂಪಾಯಿಗಳು)ಮಾತ್ರ ಪಾವತಿಸಲು ಹಾಗೂ ಈ ಭತ್ಯೆಯನ್ನು ಜಿಲ್ಲಾ ಯೋಜನಾ ಸಮಿತಿಯ ನಿಧಿಯಿಂದ ಭರಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು
2. ಎಲ್ಲಾ ಮುಖ್ಯ ಯೋಜನಾಕಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು
3. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳ ಮೂಲಕ ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳಿಗೆ(ನಗರ ಸ್ಥಳೀಯ ಸಂಸ್ಥೆಗಳನ್ನೊಳಗೊಂಡಂತೆ)

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.